ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿಇ/ಆ.ವಿ-ಎ/ವಿ.ನಿ-5/ಉ.ವರ್ಗಾ/2022-23(ಕ-ವ)

ನಿರ್ದೇಶಕರ ಕಚೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560 012
ದಿನಾಂಕ:06-07-2022.

## ಜ್ಞಾಪನ

**ವಿಷಯ**:- 2022-23ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವರ್ಗಾವಣೆಯಲ್ಲಿ, 2018ರಲ್ಲಿ ಕಡ್ಡಾಯ ವರ್ಗಾವಣೆಗೊಂಡ ಉಪನ್ಯಾಸಕರಿಗೆ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ನಡೆಸುವ ಬಗ್ಗೆ.

**ಉಲ್ಲೇಖ**:-1.ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 32 ಟಿಪಿಯು 2021, ದಿನಾಂಕ:12-05-22.
2.ಈ ಕಚೇರಿ ಸಮಸಂಖ್ಯೆ ವರ್ಗಾವಣಾ ಮಾರ್ಗಸೂಚಿ ದಿನಾಂಕ:18-05-2022.
3.ಈ ಕಚೇರಿ ಸಮಸಂಖ್ಯೆ ಜ್ಞಾಪನ ದಿನಾಂಕ:14-06-2022 ಹಾಗೂ ದಿನಾಂಕ: 30-06-2022.

* * *

2022-23ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವರ್ಗಾವಣೆಯನ್ನು ಕೌನ್ಸೆಲಿಂಗ್ ಮೂಲಕ ನಡೆಸಲು ಉಲ್ಲೇಖ-1ರ ಸರ್ಕಾರದ ಆದೇಶದಂತೆ, ಉಲ್ಲೇಖ-2ರಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವರ್ಗಾವಣಾ ಮಾರ್ಗಸೂಚಿಯನ್ನು ಹೊರಡಿಸಲಾಗಿತ್ತು. ವರ್ಗಾವಣಾ ಮಾರ್ಗಸೂಚಿಯಂತೆ ಉಪನ್ಯಾಸಕರುಗಳು ದಿನಾಂಕ:18-05-2022 ರಿಂದ ದಿನಾಂಕ: 28-05-2022 ರವರೆಗೆ ಆನ್-ಲೈನ್ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ತದನಂತರ, ಉಪನ್ಯಾಸಕರುಗಳಿಗೆ ದಿನಾಂಕ:31-05-2022ರ ವರೆಗೆ ಅರ್ಜಿ ಸಲ್ಲಿಸಲು ವಿಸ್ತರಿಸಲಾಗಿರುತ್ತದೆ.

ಆನ್-ಲೈನ್ ಮೂಲಕ ಸಲ್ಲಿಸಲಾದ ಅರ್ಜಿಗಳನ್ನು ಪರಿಶೀಲಿಸಿ ಪಟ್ಟಿ ಸಿದ್ಧಪಡಿಸಲಾಗಿರುತ್ತದೆ. ಉಲ್ಲೇಖ-3ರ ದಿನಾಂಕ:30-06-2022ರ ಜ್ಞಾಪನದಲ್ಲಿ, ಸದರಿ ಪಟ್ಟಿಗೆ ಆಕ್ಷೇಪಣೆಗಳನ್ನು ಕರೆಯಲಾಗಿರುತ್ತದೆ. ಸದರಿ ಪಟ್ಟಿಗೆ ಸ್ವೀಕರಿಸಲಾದ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಕಡ್ಡಾಯ ವರ್ಗಾವಣೆಯ ಅಂತಿಮ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಲಾಗಿದೆ. ಸದರಿ ಜೇಷ್ಠತಾ ಪಟ್ಟಿಯಲ್ಲಿನ ಕ್ರಮಾಂಕದಂತೆ ವರ್ಗಾವಣೆ ಕೌನ್ಸೆಲಿಂಗ್ ಅನ್ನು ನಡೆಸಲಾಗುವುದು.

2018ರಲ್ಲಿ ಕಡ್ಡಾಯ ವರ್ಗಾವಣೆಯಡಿ ವರ್ಗಾವಣೆಗೊಂಡ ಉಪನ್ಯಾಸಕರಿಗೆ ದಿನಾಂಕ: 07-07-2022ರ ಬೆಳಗ್ಗೆ 09-00 ಗಂಟೆಗೆ ಜಿಲ್ಲಾ ಉಪನಿರ್ದೇಶಕರ ಕಚೇರಿಯಲ್ಲಿ(ಉಪ ನಿರ್ದೇಶಕರು ಸೂಚಿಸುವ ಸ್ಥಳದಲ್ಲಿ) ಝೂಮ್ ತಂತ್ರಾಂಶದ ಮೂಲಕ ವರ್ಗಾವಣೆ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. ಝೂಮ್ ತಂತ್ರಾಂಶದ ಲಿಂಕ್‌ಅನ್ನು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಗೆ ವಾಟ್ಸಾಪ್ ಮೂಲಕ ಕಳುಹಿಸಲಾಗುವುದು. ಜಿಲ್ಲಾ ಉಪನಿರ್ದೇಶಕರುಗಳು ಉಪನ್ಯಾಸಕರ ವರ್ಗಾವಣೆಗೆ ಸಕಲ ಸಿದ್ಧತೆಗಳೊಂದಿಗೆ ತಯಾರಿರಲು ಸೂಚಿಸಿದೆ.

..2

ಕಡ್ಡಾಯ ವರ್ಗಾವಣೆಯಡಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರು ಆಯಾ ಜಿಲ್ಲಾ ಉಪನಿರ್ದೇಶಕರ ಕಚೇರಿಗೆ(ಅಥವಾ ಅವರು ಸೂಚಿಸಿದ ಸ್ಥಳಕ್ಕೆ) ಸದರಿ ದಿನಾಂಕದಂದು ಬೆಳಗ್ಗೆ 09-00 ಗಂಟೆಗೆ ಹಾಜರಿರತಕ್ಕದ್ದು, ಸದರಿ ಉಪನ್ಯಾಸಕರು ತಮ್ಮೊಂದಿಗೆ ಕಡ್ಡಾಯ ವರ್ಗಾವಣೆಗೊಂಡ ಆದೇಶದ ಪ್ರತಿ, ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ಪತ್ರವನ್ನು ಹಾಗೂ ಇಲಾಖಾ ಗುರುತಿನ ಚೀಟಿಯನ್ನು ಇಟ್ಟುಕೊಂಡಿರತಕ್ಕದ್ದು. ಇಲಾಖಾ ಜಾಲತಾಣದಲ್ಲಿ ಪ್ರಕಟಿಸಿರುವ ಅಂತಿಮ ಜೇಷ್ಠತಾ ಪಟ್ಟಿಯ ಕ್ರಮಾಂಕದಂತೆ ಕೌನ್ಸೆಲಿಂಗ್ ಪ್ರಕ್ರಿಯೆಯನ್ನು ನಡೆಸಲಾಗುವುದು. ಕೌನ್ಸೆಲಿಂಗ್‌ಗೆ ಉಪನ್ಯಾಸಕರುಗಳು ಸಕಾಲದಲ್ಲಿ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳುವುದು. ತಪ್ಪಿದಲ್ಲಿ, ಕೌನ್ಸೆಲಿಂಗ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಅವರಿಗೆ (ಕೊನೆಯ ಕ್ರಮಾಂಕದ ನಂತರ) ಸ್ಥಳ ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು. ಸ್ಥಳ ಆಯ್ಕೆ ಮಾಡಿಕೊಂಡ ಉಪನ್ಯಾಸಕರ ಹುದ್ದೆಗಳನ್ನು ಖಾಲಿ ಹುದ್ದೆಯೆಂದು ತೋರಿಸಲಾಗುವುದು. ಸ್ಥಳನಿಯುಕ್ತಿ ಕೌನ್ಸೆಲಿಂಗ್‌ನಲ್ಲಿ ಆಯ್ಕೆ ಮಾಡಿಕೊಳ್ಳುವ ಉಪನ್ಯಾಸಕರು ಒಪ್ಪಿಗೆ ಪತ್ರದಲ್ಲಿ ತಾವು ಆಯ್ಕೆ ಮಾಡಿಕೊಂಡ ಕಾಲೇಜನ್ನು ನಮೂದಿಸಿ ಸಹಿ ಮಾಡತಕ್ಕದ್ದು. ಉಪನ್ಯಾಸಕರ ಬದಲಾಗಿ ಬೇರೆ ವ್ಯಕ್ತಿಗಳು ಕೌನ್ಸೆಲಿಂಗ್‌ಗೆ ಹಾಜರಾಗಲು ಅವಕಾಶ ಇರುವುದಿಲ್ಲ.

ರಾಜ್ಯವ್ಯಾಪ್ತಿ ಸ್ಥಳೀಯ ವೃಂದದ, ಕಲ್ಯಾಣ-ಕರ್ನಾಟಕ ಪ್ರದೇಶದ ಆದ್ಯತೆಯನ್ನು ಪಡೆದವರು 2018ರ ಕಡ್ಡಾಯ ವರ್ಗವಣೆ ಕೌನ್ಸೆಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಂತೆ ಆಯಾ ಪ್ರಾಂತ್ಯದ ಸ್ಥಳವನ್ನೇ ಆಯ್ಕೆ ಮಾಡಿಕೊಳ್ಳ ಬೇಕಾಗುತ್ತದೆ. ಬೇರೆಪ್ರಾಂತ್ಯದ ಸ್ಥಳವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ.

6/7/22

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಇವರಿಗೆ:-**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ – ಮುಂದಿನ ಅಗತ್ಯ ಕ್ರಮಕ್ಕಾಗಿ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪಪೂಶಿಇ, ಬೆಂಗಳೂರು – ಇಲಾಖಾ ಜಾಲತಾಣದಲ್ಲಿ ಪ್ರಕಟಿಸುವುದು ಹಾಗೂ ಕೌನ್ಸೆಲಿಂಗ್ ಪ್ರಕ್ರಿಯೆಗೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.
3. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಎಲ್ಲಾ ಪ್ರಾಂಶುಪಾಲರುಗಳಿಗೆ ಹಾಗೂ ಸಂಬಂಧಿಸಿದ ಉಪನ್ಯಾಸಕರುಗಳಿಗೆ – ಮಾಹಿತಿಗಾಗಿ.